# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 519 |
| ಸದಸ್ಯರ ಹೆಸರು | : | ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 30.01.2026. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದ ಪ್ರಕಾರ ಹೊಸದಾಗಿ ಗ್ರಾಮ ಪಂಚಾಯಿತಿಗಳನ್ನು ರಚಿಸಬೇಕಾದಲ್ಲಿ ಇರುವ ಮಾನದಂಡಗಳು ಯಾವುವು; ರಾಜ್ಯಾದ್ಯಂತ ಇರುವ ಗ್ರಾಮ ಪಂಚಾಯಿತ್ ಗಳು ಪೈಕಿ ಎಷ್ಟು ಗ್ರಾಮ ಪಂಚಾಯತ್ ಗಳಿಂದ ಹೊಸ ಗ್ರಾಮ ಪಂಚಾಯತ್ ರಚನೆಗೆ ಬೇಡಿಕೆ ಬಂದಿದೆ; ಬೇಡಿಕೆ ಬಂದಿದ್ದಲ್ಲಿ, ಪ್ರಸ್ತಾವನೆಯು ಯಾವ ಹಂತದಲ್ಲಿದೆ; ಯಾವ ಕಾಲಮಿತಿಯಲ್ಲಿ ಹೊಸ ಗ್ರಾಮ ಪಂಚಾಯಿತಿಗಳ ರಚನೆಯಾಗುತ್ತದೆ; (ಪಟ್ಟಿ ನೀಡುವುದು)</td><td>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 4(1) ರನ್ವಯ ಐದು ಸಾವಿರಕ್ಕಿಂತ ಕಡಿಮೆ ಇಲ್ಲದ ಏಳು ಸಾವಿರಕ್ಕಿಂತ ಹೆಚ್ಚಿಗೆ ಇಲ್ಲದ ಜನಸಂಖ್ಯೆಯುಳ್ಳ ಒಂದು ಗ್ರಾಮವನ್ನು ಅಥವಾ ಗ್ರಾಮಗಳ ಗುಂಪನ್ನು ಒಳಗೊಂಡಿರುವ ಯಾವುದೇ ಪ್ರದೇಶವನ್ನು ಸರ್ಕಾರದ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೆ ಒಳಪಟ್ಟು ಡೆಪ್ಯುಟಿ ಕಮಿಷನರ್ ರವರು ಗ್ರಾಮ ಪಂಚಾಯಿತಿ ಎಂದು ಘೋಷಿಸಬಹುದು.<br><br>ಮುಂದುವರೆದು, ಸರ್ಕಾರವು ಬೆಳಗಾವಿ, ಚಿಕ್ಕಮಗಳೂರು, ದಕ್ಷಿಣ ಕನ್ನಡ ,ಧಾರವಾಡ, ಹಾಸನ, ಕೊಡಗು, ಶಿವಮೊಗ್ಗ, ಉಡುಪಿ, ಹಾವೇರಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಪ್ರದೇಶಗಳ ಎರಡು ಸಾವಿರದ ಐನ್ನೂರುಕ್ಕಿಂತ ಕಡಿಮೆ ಜನಸಂಖ್ಯೆಯುಳ್ಳ ಪ್ರದೇಶವನ್ನು ಸರ್ಕಾರವು ನಿರ್ದಿಷ್ಟಪಡಿಸಬಹುದಾದಂತ ಪಂಚಾಯಿತಿ ಪ್ರದೇಶವೆಂದು ಆದೇಶಿಸಬಹುದು.<br><br>ಹೊಸ ಗ್ರಾಮ ಪಂಚಾಯತ್ ರಚನೆಗೆ ಬೇಡಿಕೆ ಬಂದಿರುವ ವಿವರ ಈ ಕೆಳಕಂಡಂತಿದೆ.<br><br><table><tr><th>ಕ್ರ. ಸಂ.</th><th>ಜಿಲ್ಲೆ</th><th>ತಾಲ್ಲೂಕು</th><th>ನೂತನ ಗ್ರಾ.ಪಂ. ಹೆಸರು,</th></tr><tr><td>1.</td><td>ಕಲಬುರಗಿ</td><td>ಕಮಲಾಪೂರ</td><td>ಪಟವಾಡ</td></tr><tr><td>2.</td><td>ದಾವಣಗೆರೆ</td><td>ನ್ಯಾಮತಿ</td><td>ಜೀನಹಳ್ಳಿ</td></tr><tr><td>3.</td><td>ದಕ್ಷಿಣ ಕನ್ನಡ</td><td>ಸುಳ್ಯ</td><td>ನಾಲ್ಕೂರು</td></tr><tr><td>4.</td><td>ಬೆಳಗಾವಿ</td><td>ರಾಯಭಾಗ</td><td>ಬೂದಿಹಾಳ</td></tr></table></td></tr>
</table>

| | | |
|---|---|---|
| | | ಜನಗಣತಿ ಪ್ರಕ್ರಿಯೆ ಪ್ರಗತಿಯಲ್ಲಿರುವುದರಿಂದ Register General & Census Commissioner of India ರವರ ಮಾರ್ಗಸೂಚಿಯನ್ವಯ ಕಂದಾಯ ಇಲಾಖೆಯು ಹೊರಡಿಸಲಾದ ಸರ್ಕಾರದ ಆದೇಶ ಸಂಖ್ಯೆ: RD 18 LRD 2019, ದಿನಾಂಕ: 17.05.2025 ರನ್ವಯ ಡಿಸೆಂಬರ್ 31, 2025 ರೊಳಗಾಗಿ ತಾಲ್ಲೂಕು, ಮುನ್ಸಿಪಾಲಿಟಿಸ್ ಮತ್ತು ಗ್ರಾಮ ಪಂಚಾಯಿತಿಗಳ ಗಡಿ ಬದಲಾವಣೆ, ರಚನೆಗೆ ಬಾಕಿ ಇರುವ ಮತ್ತು ರಚಿಸಲು ಉದ್ದೇಶಿಸಿರುವ ಪ್ರಸ್ತಾವನೆಗಳನ್ನು ಪೂರ್ಣಗೊಳಿಸಲು ಆದೇಶಿಸಲಾಗಿದೆ.<br><br>ಪ್ರಸ್ತುತ ಜನಗಣತಿ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಜನಗಣತಿ ಪೂರ್ಣಗೊಂಡ ನಂತರ ಅದರ ದತ್ತಾಂಶಗಳನ್ವಯ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣ 4 ರಡಿ ನಿಗಧಿಪಡಿಸಿದ ಜನಸಂಖ್ಯೆಯ ಪ್ರಮಾಣವನ್ನು ಹೊಂದಿದ್ದಲ್ಲಿ ಹೊಸ ಗ್ರಾಮ ಪಂಚಾಯಿತಿಯನ್ನಾಗಿ ರಚಿಸಲು ಪರಿಶೀಲಿಸಲಾಗುವುದು. |
| (ಆ) | ಒಂದು ವೇಳೆ ಹೊಸ ಗ್ರಾಮ ಪಂಚಾಯಿತಿಗಳನ್ನು ಸರ್ಕಾರವು ರಚಿಸದೇ ಇದ್ದಲ್ಲಿ ಈಗಾಗಲೇ ಇರುವ ಪಂಚಾಯಿತಿಗಳನ್ನು ಪರಸ್ಪರ ಜೋಡಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; (ವಿವರ ನೀಡುವುದು) | ಇಂತಹ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| (ಇ) | ಕಳೆದ 3 ವರ್ಷಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತಿಸಲಾದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಯಾವ ಕಾರಣಗಳಿಗಾಗಿ ಸದರಿ ಗ್ರಾಮ ಪಂಚಾಯಿತಿಗಳನ್ನು ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತಿಸಲಾಗಿದೆ? | ಕಳೆದ 3 ವರ್ಷಗಳ ಅವಧಿಯಲ್ಲಿ ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತಿಸಲಾದ ಗ್ರಾಮ ಪಂಚಾಯಿತಿಗಳ ಸಂಖ್ಯೆ:11.<br><br>ಕರ್ನಾಟಕ ಪೌರ ಸಭೆಗಳ ಅಧಿನಿಯಮ, 1964 ರ ಪ್ರಕರಣ 349 ರಲ್ಲಿನ ಮಾನದಂಡಗಳನ್ವಯ ಪರಿಶೀಲಿಸಿ, ಆಡಳಿತಾತ್ಮಕ ಮತ್ತು ಪ್ರಗತಿಪರ ಹಿತದೃಷ್ಠಿಯಿಂದ ಆರ್ಥಿಕ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಸಹಮತಿಯೊಂದಿಗೆ ನಗರಾಭಿವೃದ್ಧಿ ಇಲಾಖೆಯು ಈ ಗ್ರಾಮ ಪಂಚಾಯತಿಗಳನ್ನು ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತಿಸಲಾಗಿರುತ್ತದೆ. |

ಸಂಖ್ಯೆ: ಗ್ರಾಅಪ 99 ಗ್ರಾಪಂಅ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.